# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ
## ಸಹಾಯಕ ಅಭಿಯಂತರರ ಕಛೇರಿ, ವಾರ್ಡ್ ಸಂಖ್ಯೆ: 154, ಬಸವನಗುಡಿ ಬೆಂಗಳೂರು.

ಸಂಖ್ಯೆ: ಸ.ಅ/ವಾ-154/2022-23 ದಿನಾಂಕ: 07-09-2022

### ವಾರ್ಡ್ ಸಮಿತಿ ಸಭೆಯ ನಡವಳಿಗಳು

***********

ವಿಷಯ: ಮಾನ್ಯ ಆಯುಕ್ತರು, ಬಿ.ಬಿ.ಎಂ.ಪಿ ರವರ ಕಛೇರಿ ಆದೇಶದ ಸಂಖ್ಯೆ: ಬಿ12(5)/ಪಿಆರ್/35/2020-21, ದಿನಾಂಕ: 21-09-2020ರ ಆದೇಶದಂತೆ ದಿನಾಂಕ: 03-09-2022 ಶನಿವಾರ ವಾರ್ಡ್ ಸಂಖ್ಯೆ: 154, ಬಸವನಗುಡಿ ವಾರ್ಡ್ ಕಛೇರಿಯಲ್ಲಿ ನಡೆದ ಸೆಪ್ಟೆಂಬರ್ ತಿಂಗಳ 1ನೇ ವಾರ್ಡ್ ಸಮಿತಿ ಸಭೆಯ ನಡವಳಿಗಳು

ಸ್ಥಳ: ಬಿಬಿಎಂಪಿ ವಾರ್ಡ್ ಕಛೇರಿ, ಬಸವನಗುಡಿ, ಎನ್.ಆರ್. ಕಾಲೋನಿ ಹತ್ತಿರ
ಸಮಯ: ಬೆಳಿಗ್ಗೆ 11.00 ಗಂಟೆಗೆ

**ಹಾಜರಿದ್ದ ಸದಸ್ಯರು ಮತ್ತು ಅಧಿಕಾರಿಗಳ ವಿವರ**

| ಕ್ರ.ಸಂ | ಹೆಸರು | ಪದನಾಮ |
|---|---|---|
| 1 | ಶ್ರೀ ಮಂಜುನಾಥ ರೆಡ್ಡಿ | ಅಧ್ಯಕ್ಷರು ಹಾಗೂ ನೋಡಲ್ ಅಧಿಕಾರಿಗಳು |
| 2 | ಶ್ರೀ ಟಿ. ಕೃಷ್ಣಮೂರ್ತಿ | ಸಹಾಯಕ ಅಭಿಯಂತರರು, ಕಾರ್ಯದರ್ಶಿ ಮತ್ತು ಸಂಚಾಲಕರು ವಾರ್ಡ್-154, ಬಸವನಗುಡಿ |
| 3 | ಶ್ರೀ. ಎಂ. ಕೃಷ್ಣಮೂರ್ತಿ | ಕಿರಿಯ ಅಭಿಯಂತರರು |
| 4 | ಶ್ರೀಮತಿ. ಮಾಲಿನಿ. ಎಂ | ಬೀದಿ ದೀಪ ನಿರ್ವಹಣೆ |
| 5 | ಶ್ರೀ. ದೊರ | ಸಾರ್ವಜನಿಕರು |
| | ಶ್ರೀ. ಅಕ್ಷಯ ಜಿ. ಕುಂಬ್ಳೆ | ಸಾರ್ವಜನಿಕರು |
| 6 | ಶ್ರೀ. ಸತೀಶ್ ಉರಾಳ್ | ಸಾರ್ವಜನಿಕರು |
| 7 | ಶ್ರೀ. ಗಿರಿವಾಸಲುನಾಯ್ಡು | ಸಾರ್ವಜನಿಕರು |
| 8 | ಶ್ರೀ. ರಾಜು.ಬಿ | ಸಾರ್ವಜನಿಕರು |
| 9 | ಶ್ರೀ. ದೇವಾಂಗಶೆಟ್ಟಿ | ಸಾರ್ವಜನಿಕರು |
| 10 | ಶ್ರೀ. ಆನಂದತೀರ್ಥ | ಸಾರ್ವಜನಿಕರು |
| 11 | ಶ್ರೀ. ಶ್ರೀಕಾಂತ್ ಪಡಕಿ | ಸಾರ್ವಜನಿಕರು |

ಅಧ್ಯಕ್ಷರು ಮತ್ತು ನೋಡಲ್ ಅಧಿಕಾರಿಗಳಾದ ಶ್ರೀ. ಮಂಜುನಾಥ ರೆಡ್ಡಿ ರವರು ಸಭೆಯಲ್ಲಿ ಹಾಜರಿದ್ದ ಎಲ್ಲಾ ಅಧಿಕಾರಿಗಳಿಗೆ ಮತ್ತು ಸದಸ್ಯರಿಗೆ ಸ್ವಾಗತ ಕೋರುವುದರೊಂದಿಗೆ ಸಭೆಯನ್ನು ಪ್ರಾರಂಭಿಸಲಾಯಿತು.

1. ಸಭೆಯಲ್ಲಿ ಹಾಜರಿದ್ದ ಕಂದಾಯ ಅಧಿಕಾರಿಗಳು ವಾರ್ಡ್ ವ್ಯಾಪ್ತಿಯಲ್ಲಿ ಕರಡು ಮತದಾರರ ಪಟ್ಟಿ ಪರಿಷ್ಕರಣೆ ನಡೆಯುತ್ತಿದ್ದು, ಸಾರ್ವಜನಿಕರು ತಮ್ಮ ಹೆಸರನ್ನು ಮತದಾರರ ಪಟ್ಟಿಯಲ್ಲಿ ಪರಿಶೀಲಿಸಲು ಅವಕಾಶವಿರುತ್ತದೆ ಎಂದು ತಿಳಿಸಿರುತ್ತಾರೆ. ಸಾರ್ವಜನಿಕರು ತಮ್ಮ Epic ಸಂಖ್ಯೆಗಳನ್ನು ಪರಿಶೀಲಿಸಿಕೊಳ್ಳಲು ಅವಕಾಶ ನೀಡಿರುವುದಾಗಿ ತಿಳಿಸಿರುತ್ತಾರೆ. ಮತದಾರರ ಚೀಟಿಯನ್ನು ಆಧಾರ್ ನಂಬರ್‌ಗೆ ಜೋಡಿಸುವ ಬಗ್ಗೆ ಜಾಗೃತಿ ಮೂಡಿಸುವ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದ್ದು ಇದರ ಉಪಯೋಗ ಪಡೆಯಲು ಸಭೆಯಲ್ಲಿ ಸಾರ್ವಜನಿಕರಿಗೆ ತಿಳಿಸಿರುತ್ತಾರೆ. ಅಂತಿಮ ಮತದಾರರ ಪಟ್ಟಿಯನ್ನು ಸೆಪ್ಟೆಂಬರ್, 22, 2022 ರೊಳಗೆ ಪ್ರಕಟಿಸುವುದಾಗಿ ಸಭೆಗೆ ತಿಳಿಸಿರುತ್ತಾರೆ.



Scanned with CamScanner

2. ಸಭೆಯಲ್ಲಿ ಸಾರ್ವಜನಿಕರು ವಾರ್ಡ್ ವ್ಯಾಪ್ತಿಯಲ್ಲಿನ ಕೆಲವು ಪ್ರಮುಖ ರಸ್ತೆಗಳಾದ ಪುಟ್ಟಣ್ಣ ರಸ್ತೆ, ಮಾರ್ಕೆಟ್ ರಸ್ತೆ ಇತ್ಯಾದಿ ರಸ್ತೆಗಳಲ್ಲಿ ವಾರಸುದಾರರಿಲ್ಲದ ವಾಹನಗಳನ್ನು ನಿಲ್ಲಿಸಿದ್ದು ಇದರಿಂದ ರಸ್ತೆಯಲ್ಲಿ ಸಾರ್ವಜನಿಕರ ಓಡಾಟಕ್ಕೆ ತೊಂದರೆಯಾಗುತ್ತಿದ್ದು ಸದರಿ ವಾಹನಗಳನ್ನು ತೆರವುಗೊಳಿಸಲು ಕ್ರಮಕೈಗೊಳ್ಳುವ ಬಗ್ಗೆ ಸಭೆಯಲ್ಲಿ ಸಾರ್ವಜನಿಕರು ಕೋರಿರುತ್ತಾರೆ ಹಾಗೂ ಈ ವಿಷಯದ ಬಗ್ಗೆ ಪೋಲೀಸರ ಸಹಕಾರದೊಂದಿಗೆ ವಾಹನಗಳ ಮಾಲೀಕರುಗಳನ್ನು ಗುರುತಿಸಿ ಕ್ರಮಕೈಗೊಳ್ಳಲು ನೋಡಲ್ ಅಧಿಕಾರಿಗಳು ಸಹಾಯಕ ಅಭಿಯಂತರರಿಗೆ ಸೂಚಿಸಿರುತ್ತಾರೆ.

3. ಸಭೆಯಲ್ಲಿ ಹಾಜರಿದ್ದ ಬೀದಿ ದೀಪಗಳ ನಿರ್ವಹಣಾ ಗುತ್ತಿಗೆದಾರರು ವಾರ್ಡ್ ವ್ಯಾಪ್ತಿಯಲ್ಲಿ ಅಂದಾಜು 4,000/- ಬೀದಿದೀಪಗಳಿರುತ್ತವೆ ಎಂದು ಸಭೆಯಲ್ಲಿ ತಿಳಿಸಿರುತ್ತಾರೆ ಮತ್ತು ಅವುಗಳನ್ನು ಸೂಕ್ತ ರೀತಿಯಲ್ಲಿ ನಿರ್ವಹಿಸುತ್ತಿರುವುದಾಗಿ ತಿಳಿಸಿರುತ್ತಾರೆ. ಬೀದಿ ದೀಪಗಳ ತಪಾಸಣೆಯನ್ನು ವಾರದಲ್ಲಿ ಎರಡು ದಿನಗಳಂದು ಮಾಡುತ್ತಿದ್ದು ದೀಪಗಳು ಹಾಳಾಗಿರುವ ದೂರು ಬಂದ 24 ಗಂಟೆಯೊಳಗೆ ಸರಿಪಡಿಸಲಾಗುತ್ತಿರುತ್ತದೆ ಮತ್ತು ಬೀದಿದೀಪಗಳ ನಿರ್ವಹಣೆಗೆ 2 ವಾಹನಗಳನ್ನು ನಿಯೋಜಿಸಲಾಗಿರುತ್ತದೆ ಎಂದು ಸಭೆಗೆ ತಿಳಿಸಿರುತ್ತಾರೆ. ಸಭೆಯಲ್ಲಿ ಹಾಜರಿದ್ದ ಸಾರ್ವಜನಿಕರು ಜನರ ಓಡಾಟ ವಿರಳವಾಗಿರುವ ಕಡೆ ಬೀದಿ ದೀಪಗಳು ಸರಿಯಾಗಿ ಉರಿಯುತ್ತಿರುವ ಬಗ್ಗೆ ತಪಾಸಣೆ ನಡೆಸಿ ನಿರ್ವಹಣೆ ಮಾಡಲು ಸಭೆಯಲ್ಲಿ ಸಾರ್ವಜನಿಕರು ತಿಳಿಸಿರುತ್ತಾರೆ. ಮುಂದುವರೆದು ಬೀದಿ ದೀಪಗಳ ನಿರ್ವಹಣಾ ವಾಹನವು ವಾರದ ಎಲ್ಲಾ ದಿನಗಳಲ್ಲೂ ತಪಾಸಣೆಯನ್ನು ನಿರ್ವಹಿಸಬೇಕೆಂದು ಸಾರ್ವಜನಿಕರು ಸಭೆಯಲ್ಲಿ ಕೋರಿರುತ್ತಾರೆ. ಈ ಬಗ್ಗೆ ಕ್ರಮಕೈಗೊಳ್ಳುವುದಾಗಿ ಬೀದಿ ದೀಪಗಳ ನಿರ್ವಹಣಾ ಗುತ್ತಿಗೆದಾರರು ಸಭೆಯಲ್ಲಿ ತಿಳಿಸಿರುತ್ತಾರೆ.

4. ವಾರ್ಡ್ ವ್ಯಾಪ್ತಿಯಲ್ಲಿ ಬಿ.ಡಬ್ಲ್ಯೂ.ಎಸ್.ಎಸ್.ಬಿ ವತಿಯಿಂದ ನೀರು ಬಿಡುವ ಸಮಯದ ಬದಲಾವಣೆಯಾಗಿದ್ದು ಈ ಬದಲಾವಣೆಯ ಸಮಯವು ಸಾರ್ವಜನಿಕರಿಗೆ ಅನಾನುಕೂಲವಾಗಿರುವುದರಿಂದ ಈ ಬಗ್ಗೆ ಸದರಿಯವರಿಗೆ ತಿಳಿಸಿ ಕ್ರಮಕೈಗೊಳ್ಳಲು ಸಭೆಯಲ್ಲಿ ಸಾರ್ವಜನಿಕರು ಕೋರಿರುತ್ತಾರೆ.

5. ಬಸವನಗುಡಿ ವಾರ್ಡ್ ವ್ಯಾಪ್ತಿಯ ಪೋಲೀಸ್ ಠಾಣಾ ರಸ್ತೆ, ಜೈನ್ ಕ್ಲಿನಿಕ್ ಮುಂಭಾಗ ಬೈ ಟು ಕಾಫಿ ಹೋಟೆಲ್‌ನ ಸುತ್ತಮುತ್ತ ಬೀಳುವ ಶಿಥಿಲವಾಗಿರುವ ಮರದ ರೆಂಬೆ ಕೊಂಬೆಗಳನ್ನು ತೆರವುಗೊಳಿಸಿಕೊಡಲು ಸಾರ್ವಜನಿಕರು ಸಭೆಯಲ್ಲಿ ಕೋರಿರುತ್ತಾರೆ. ಈ ಬಗ್ಗೆ ಅರಣ್ಯ ಅಧಿಕಾರಿಗಳಿಗೆ ಪತ್ರ ಬರೆದು ಕ್ರಮಕೈಗೊಳ್ಳುವ ಬಗ್ಗೆ ನೋಡಲ್ ಅಧಿಕಾರಿಗಳು ಸಭೆಯಲ್ಲಿ ತಿಳಿಸಿರುತ್ತಾರೆ.

6. ಡಿ.ವಿ.ಜಿ ರಸ್ತೆ, ಪೂರ್ವ ಆಂಜನೇಯ ರಸ್ತೆ, ಪೋಲೀಸ್ ಠಾಣಾ ರಸ್ತೆಗಳಲ್ಲಿ ಪಾದಚಾರಿ ರಸ್ತೆಯನ್ನು ಅತಿಕ್ರಮಿಸಿಕೊಂಡು ಅಂಗಡಿಗಳನ್ನು ನಡೆಸುತ್ತಿರುವುದರಿಂದ ಜನರ ಓಡಾಟಕ್ಕೆ ತೊಂದರೆಯಾಗಿರುತ್ತದೆ ಸದರಿ ಅಂಗಡಿ ಮಳಿಗೆಗಳಿಗೆ ಲೈಸನ್ಸ್ ನೀಡಿರುವ ಬಗ್ಗೆ ವಿವರಣೆ ನೀಡಲು ಸಾರ್ವಜನಿಕರು ಆರೋಗ್ಯ ಅಧಿಕಾರಿಗಳಿಗೆ ಮನವಿ ನೀಡಿರುತ್ತಾರೆ.

7. ಡಿ.ವಿ.ಜಿ ರಸ್ತೆಯಲ್ಲಿ ಸುಬ್ಬರಾಮಚೆಟ್ಟಿ ರಸ್ತೆಯಿಂದ ಮಲ್ಲಿಕಾರ್ಜುನ ರಸ್ತೆಯವರೆಗೆ ಏಕಮುಖ ಸಂಚಾರವಿದ್ದು ಇದರಿಂದ ಸಾರ್ವಜನಿಕರಿಗೆ ಅನಾನುಕೂಲವಾಗುತ್ತಿದ್ದು ಇದನ್ನು ಸರಿಪಡಿಸಲು ಸಂಚಾರಿ ಪೋಲೀಸ್ ರವರಿಗೆ ತಿಳಿಸಲು ಸಾರ್ವಜನಿಕರು ಸಭೆಯಲ್ಲಿ ಕೇಳಿರುತ್ತಾರೆ. ಈ ಬಗ್ಗೆ ಸದರಿ ಸಂಚಾರಿ ಪೋಲೀಸ್ ವಿಭಾಗಕ್ಕೆ ಮಾಹಿತಿ ನೀಡಿ ಕ್ರಮಕೈಗೊಳ್ಳಲು ತಿಳಿಸುವುದಾಗಿ ನೋಡಲ್ ಅಧಿಕಾರಿಗಳು ಸಭೆಯಲ್ಲಿ ತಿಳಿಸಿರುತ್ತಾರೆ.

ಮೇಲಿನ ಎಲ್ಲಾ ಅಂಶಗಳನ್ನು ಪರಿಗಣಿಸಿ ಅಧ್ಯಕ್ಷರು ರವರು ಈ ವಿಷಯಗಳ ಬಗ್ಗೆ ಮುಂದಿನ ಕ್ರಮಕೈಗೊಳ್ಳಲು ಸರ್ವಾನುಮತದಿಂದ ತೀರ್ಮಾನಿಸಿ, ವಂದನೆಗಳೊಂದಿಗೆ ಈ ಸಭೆಯನ್ನು ಅಧ್ಯಕ್ಷರು ಮುಕ್ತಾಯಗೊಳಿಸಿದರು.

ಕಾರ್ಯದರ್ಶಿಗಳು
ಹಾಗೂ ಸಹಾಯಕ ಅಭಿಯಂತರರು
ವಾರ್ಡ್ ಸಂಖ್ಯೆ: 154, ಬಸವನಗುಡಿ

07/9
ಅಧ್ಯಕ್ಷರು
ಹಾಗೂ ನೋಡಲ್ ಅಧಿಕಾರಿಗಳು
ವಾರ್ಡ್ ಸಂಖ್ಯೆ: 154, ಬಸವನಗುಡಿ



Scanned with CamScanner